ಕಬ್ಬು ಅರೆಯಬೇಕಾಗಿರುತ್ತದೆ. ಮಹಾರಾಷ್ಟ್ರ ರಾಜ್ಯಕ್ಕೆ ಹೋಗುತ್ತಿರುವ ಕಬ್ಬು ಇದೇ ರೀತಿ ಮುಂದುವರೆದಲ್ಲಿ ಕಾರ್ಖಾನೆಗೆ ಫೆಬ್ರುವರಿ ತಿಂಗಳ ನಂತರ ಕಬ್ಬಿನ ಕೊರತೆ ಉಂಟಾಗಬಹುದು. ಒಂದು ವೇಳೆ ಹೀಗೆ ಕೊರತೆ ಉಂಟಾದಲ್ಲಿ ಪೂರ್ಣ ಸಾಮರ್ಥ್ಯ ಬಳಕೆಯಾಗದ ಕಾರಣವೂ ಸಹ ನಷ್ಟ ಉಂಟು ಮಾಡುವುದು. ಆದ್ದುದರಿಂದ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ ಅಗತ್ಯ ಕಬ್ಬು ಪೂರೈಕೆಯಾಗಬೇಕೆಂಬ ದೃಷ್ಟಿಯಿಂದ ಹೊರಗಡೆ ಹೋಗುವ ಕಬ್ಬನ್ನು ತಡೆಗಟ್ಟುವ ಬಗ್ಗೆ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ.

ಸಹಕಾರ ಇಲಾಖೆ ಅಧ್ಯಕ್ಷರ ವಾರ್ಷಿಕ ಅವಧಿ ವಿಚಾರ.

850 - ಶ್ರೀ ಕೆ. ಶಾಮಣ್ಣ (ಶೃಂಗೇರಿ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಸಹಕಾರ ಇಲಾಖೆಯ ಕಾಯಿದೆಯ ಪ್ರಕಾರ ವಾರ್ಷಿಕ ಆಡಳಿತ ಮಂಡಳಿಯ ಅಧ್ಯಕ್ಷರ ಅವಧಿಯು ಯಾವಾಗ ಮುಕ್ತಾಯವಾಗುವುದು?*

ಆ) *ಹಾಗಿದ್ದಲ್ಲಿ ಜನರಲ್ ಬಾಡಿಯಿಂದ ಮತ್ತೊಂದು ಜನರಲ್ ಬಾಡಿಯವರೆಗೆ ಅವಧಿ ಎಷ್ಟು?*

ಇ) *ಕೊಪ್ಪ ತಾಲ್ಲೂಕು ಕರೀಮನೆ ಭೂ ಅಭಿವೃದ್ಧಿ ಬ್ಯಾಂಕ್ ಅಧ್ಯಕ್ಷರು ಮುಂದುವರಿಯುತ್ತಿರುವುದಕ್ಕೆ ಕಾರಣವೇನು?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಸಹಕಾರ ಸಚಿವರು) :

ಅ) ಕರ್ನಾಟಕ ಸಹಕಾರ ಸಂಘಗಳ ಕಾಯಿದೆಯ ಪ್ರಕಾರ ಪ್ರತಿ ವರ್ಷ ಅಧ್ಯಕ್ಷರ ಚುನಾವಣೆ ನಡೆಯಬೇಕಾಗಿರುತ್ತದೆ.

ಆ) ಒಂದು ಸಹಕಾರಿ ವರ್ಷ

ಇ) ದಿನಾಂಕ 29-12-1992ರಂದು ಕರೀಮನೆಯ ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನಲ್ಲಿ ಹೊಸ ಅಧ್ಯಕ್ಷರ ಚುನಾವಣೆ ನಡೆದಿರುತ್ತದೆ.

ಗುಲ್ಬರ್ಗಾ ಜಿಲ್ಲೆಯ ವ್ಯವಸಾಯ ಸೇವಾ ಸಹಕಾರ ಸಂಘದಿಂದ ಗೊಬ್ಬರದ ವಿತರಣೆಯಲ್ಲಿ ಅವ್ಯವಹಾರ.

866 - ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಗುಲ್ಬರ್ಗಾ ಜಿಲ್ಲೆಯ ವ್ಯವಸಾಯ ಸೇವಾ ಸಹಕಾರ ಸಂಘದವರು ಸಾಲ ಮಂಜೂರಾದ ಸದಸ್ಯರುಗಳಿಗೆ ರಸಗೊಬ್ಬರಗಳನ್ನು ವಿತರಣೆ ಮಾಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ರಸಗೊಬ್ಬ ವಿತರಣೆಯಲ್ಲಿ ಅವ್ಯವಹಾರ ನಡೆದಿರುವುದು ನಿಜವೆ?*

ಇ) *ಹಾಗಿದ್ದಲ್ಲಿ ಸಂಬಂಧಪಟ್ಟವ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು?*

ಈ) *ರಸಗೊಬ್ಬರಗಳನ್ನು ಸಂಘದ ಸದಸ್ಯರುಗಳಿಗೆ ವಿತರಣೆ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೆ?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಸಹಕಾರ ಸಚಿವರು) :

ಅ) ಗುಲ್ಬರ್ಗಾ ಜಿಲ್ಲೆಯ ವ್ಯವಸಾಯ ಸೇವಾ ಸಹಕಾರ ಸಂಘಗಳ ಪೈಕಿ ಎರಡು ಸಹಕಾರ ಸಂಘಗಳಾದ ಒಳಪಟ್ಟಿ ಮತ್ತು ಆಂದೋಲಾ ಇವುಗಳು